MARCH 28,2025
ALL INDIA RADIO- DHARWAD
PRADESH SAMACHARA (KANNADA) 12PM

<><><>

ಆಕಾಶವಾಣಿ

ಪ್ರದೇಶ ಸಮಾಚಾರ

ಓದಿದವವರು: ವಿವೇಕಾದಿತ್ಯ ಕನಿಯಾಲ

<><><>

ಸರ್ಕಾರಿ ಉದ್ಯೋಗಗಳಲ್ಲಿ, ಪರಿಶಿಷ್ಟ ಸಮುದಾಯಗಳಿಗೆ ಒಳ ಮೀಸಲಾತಿ ನೀಡುವ ಕುರಿತಂತೆ, ನಿವೃತ್ತ ನ್ಯಾಯಮೂರ್ತಿ ಎಚ್.ಎನ್. ನಾಗಮೋಹನ್ ದಾಸ್ ಸಮಿತಿ, ಮುಖ್ಯಮಂತ್ರಿ ಸಿದ್ದರಾಮಯ್ಯ ಅವರಿಗೆ, 104 ಪುಟಗಳ ಮಧ್ಯಂತರ ವರದಿ ಸಲ್ಲಿಸಿತು. ಬಳಿಕ ಬೆಂಗಳೂರಿನಲ್ಲಿ ಮಾತನಾಡಿದ ನಾಗಮೋಹನ್ ದಾಸ್ ಅವರು, ಪರಿಶಿಷ್ಟ ಜಾತಿಯ ಉದ್ಯೋಗಾಂಕ್ಷಿಗಳಿಗೆ, ಅನ್ಯಾಯವಾಗದಂತೆ ಹಾಗೂ ಅವರಿಗೆ ಶಾಶ್ವತ ಪರಿಹಾರ ನೀಡಬೇಕು ಎಂದು, ಸಮಿತಿ ಬಯಸಿದ್ದಾಗಿ ತಿಳಿಸಿದರು.

<><><>

ರಾಜ್ಯದ ಒಟ್ಟು 10 ಜನ ಯುವತಿಯರು, ಭಾರತೀಯ ನೌಕಾಪಡೆಗೆ ಆಯ್ಕೆಯಾಗಿದ್ದಾರೆ. ವಿಜಯಪುರ ಜಿಲ್ಲೆ ಅಕ್ಷತಾ ಗಂಧೆ ಹಾಗೂ ಅಂಜುಮ್ ಶೇಖ್, ಈಗಾಗಲೇ ಒಡಿಶಾದ ಚಿಲ್ಕಾ ಐ.ಎನ್.ಎಸ್ ಕೇಂದ್ರದಲ್ಲಿ ಪ್ರಥಮ ಹಂತದ ತರಬೇತಿ ಪಡೆದಿದ್ದಾರೆ. ಈ ತಿಂಗಳ 31 ರಂದು ಮುಂಬಯಿ ಹಾಗೂ ಪುಣೆಗೆ ಹೆಚ್ಚಿನ ತರಬೇತಿಗಾಗಿ ತೆರಳಲಿದ್ದಾರೆ. ನೌಕಾಪಡೆಯ ಸೀನಿಯರ್ ಸೆಕೆಂಡರಿ ರಿಕ್ರೂಟ್ ಹುದ್ದೆಗೆ ಆಯ್ಕೆಯಾಗಿರುವ ಅಕ್ಷತಾ ಗಂಧೆ ಅವರು ಪ್ರದೇಶ ಸಮಾಚಾರದೊಂದಿಗೆ ತಮ್ಮ ಸಂತಸ ಹಂಚಿಕೊಂಡಿದ್ದಾರೆ.

<><><>

ಬೈಟ್: ಅಕ್ಷತಾ ಗಂಧೆ 36 ಸೆಕೆಂದುಗಳು

<><><>

ರಾಜ್ಯದಲ್ಲಿ ಮೂಲಸೌಕರ್ಯ ಹಾಗೂ ಬೋಧನಾ ಮಾನದಂಡಗಳನ್ನು ಪೂರೈಸಲು ವಿಫಲವಾದ ಪ್ಯಾರಾ ಮೆಡಿಕಲ್ ಸಂಸ್ಥೆಗಳನ್ನು ಮುಚ್ಚಬೇಕು ಎಂದು ವೈದ್ಯಕೀಯ ಶಿಕ್ಷಣ, ಕೌಶಲಾಭಿವೃದ್ಧಿ ಮತ್ತು ಜೀವನೋಪಾಯ ಖಾತೆ ಸಚಿವ ಡಾಕ್ಟರ್ ಶರಣ ಪ್ರಕಾಶ್ ಪಾಟೀಲ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದಾರೆ. ಬೆಂಗಳೂರು ವಿಕಾಸಸೌಧದಲ್ಲಿ ನಡೆದ ರಾಜ್ಯ ಮೆಡಿಕಲ್ ಮಂಡಳಿಯ ಪರಿಶೀಲನಾ ಸಭೆಯಲ್ಲಿ ಸಚಿವರು ಖಾಸಗಿ ಕಾಲೇಜುಗಳಲ್ಲಿನ ನ್ಯೂನ್ಯತೆಗಳ ಕುರಿತ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಹೆಚ್ಚಿನ ಶುಲ್ಕವನ್ನು ಪಡೆಯುವ ಕೆಲ ಖಾಸಗಿ ಶಿಕ್ಷಣ ಸಂಸ್ಥೆಗಳು ಗುಣಮಟ್ಟದ ಶಿಕ್ಷಣ ನೀಡುವಲ್ಲಿ ವಿಫಲವಾಗಿವೆ ಎಂದರು.

<><><>

ರಂಗಭೂಮಿ ಜನರಲ್ಲಿ ಅಡಗಿರುವ ಮೌಢ್ಯವನ್ನು ಹೋಗಲಾಡಿಸಿ, ಬಡತನ ನಿರ್ಮೂಲನೆ, ಸಾಕ್ಷರತೆಯ ಬಗ್ಗೆ ಸಾಮಾಜಿಕ ಅರಿವು ಮೂಡಿಸುವಲ್ಲಿ ಮಹತ್ವದ ಪಾತ್ರ ವಹಿಸಿದೆ ಎಂದು ರಾಜ್ಯ ಶಾಲಾ ನಾಯಕತ್ವ, ಶೈಕ್ಷಣಿಕ ಯೋಜನೆ ಮತ್ತು ನಿರ್ವಹಣಾ ಸಂಸ್ಥೆ ನಿರ್ದೇಶಕರಾದ ಡಾಕ್ಟರ್ ಬಿ.ಕೆ.ಎಸ್ ವರ್ಧನ ಹೇಳಿದರು. ಧಾರವಾಡದ ರಂಗಾಯಣ ಸಮುಚ್ಚಯ ಸಭಾಭವನದಲ್ಲಿ, ವಿಶ್ವ ರಂಗಭೂಮಿ ದಿನಾಚರಣೆ ಅಂಗವಾಗಿ ಆಯೋಜಿಸಲಾಗಿದ್ದ 'ರಂಗಭೂಮಿ ಮತ್ತು ಸಾಮಾಜಿಕ ಪರಿವರ್ತನೆ: ಸಾಧ್ಯತೆ ಮತ್ತು ಸವಾಲುಗಳು' ಕುರಿತ ಉಪನ್ಯಾಸ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಅವರು ಮಾತನಾಡಿದರು.

<><><>

ಹಾಸನ ಜಿಲ್ಲೆ, ಬೇಲೂರು ತಾಲೂಕು ಬ್ಯಾದನೆ ಗ್ರಾಮದಲ್ಲಿ, ಭುವನೇಶ್ವರಿ ಗುಂಪಿನ ಗಂಡಾನೆಗೆ, ರೇಡಿಯೋ ಕಾಲರ್ ಅಳವಡಿಸುವಲ್ಲಿ, ಡಾಕ್ಟರ್ ರಮೇಶ್ ನೇತೃತ್ವದ ಆನೆ ಕ್ಷಿಪ್ರ ಕಾರ್ಯಪಡೆ ತಂಡ, ಯಶಸ್ವಿಯಾಗಿದೆ. ಕಾಡಾನೆಗಳ ಚಲನ ವಲನದ ಮಾಹಿತಿ ಪಡೆದು, ಸಾರ್ವಜನಿಕರಿಗೆ ಮುನ್ಸೂಚನೆ ನೀಡಲು, ಅರಣ್ಯ ಇಲಾಖೆ ಕಾರ್ಯಾಚರಣೆ ಆರಂಭಿಸಿದೆ.

<><><>

'ಗರ್ಭಕಂಠ ಕ್ಯಾನ್ಸರ್ ಮುಕ್ತ ಕರ್ನಾಟಕ' ಧ್ಯೇಯದೊಂದಿಗೆ, ಹದಿಹರೆಯದ ಹೆಣ್ಣು ಮಕ್ಕಳಿಗೆ, Human Papilloma virus – ಎಚ್.ಪಿ.ವಿ. ಲಸಿಕೆ ಹಾಕುವ ಅಭಿಯಾನಕ್ಕೆ, ಒತ್ತು ನೀಡಲಾಗಿದೆ ಎಂದು, ಆರೋಗ್ಯ ಖಾತೆ ಸಚಿವ ದಿನೇಶ ಗುಂಡೂರಾವ ತಿಳಿಸಿದ್ದಾರೆ. ಚಿಕ್ಕಬಳ್ಳಾಪುರ ಜಿಲ್ಲೆಯಲ್ಲಿ ಎಚ್.ಪಿ.ವಿ. ಲಸಿಕೆ ಪ್ರಾಯೋಗಿಕ ಅನು ಷ್ಠಾನಕ್ಕೆ ಪ್ರಸ್ತಾಪವಿದೆ. ಏಪ್ರಿಲ್ ತಿಂಗಳಿನಲ್ಲಿ ಲಸಿಕೆ ಅಭಿಯಾನ ರಾಜ್ಯಾದ್ಯಂತ ವಿಸ್ತರಿಸಲು ಶೀಘ್ರ ನಿರ್ಧರಿಸುವುದಾಗಿ, ಸಾಮಾಜಿಕ ಮಾಧ್ಯಮ ಎಕ್ಸ್‌ನಲ್ಲಿ, ಅವರು ಪ್ರಕಟಿಸಿದ್ದಾರೆ.

<><><>

ರಾಜ್ಯದ ಅರ್ಹ 100 ಜನ ರೈತರಿಗೆ ಉಚಿತ ರೊಬೊಟಿಕ್ ಮೊಣಕಾಲು ಕೀಲು ಕಸಿ ಶಸ್ತ್ರಚಿಕಿತ್ಸೆ ಒದಗಿಸುವ, ಬೆಂಗಳೂರಿನ 'ಕಾವೇರಿ ಹಾಸ್ಪಿಟಲ್ಸ್'ನ 'ಕಾವೇರಿ ಸಂಕಲ್ಪ' ಕಾರ್ಯಕ್ರಮಕ್ಕೆ ಕೃಷಿ ಖಾತೆ ಸಚಿವ ಎನ್.ಚಲುವರಾಯಸ್ವಾಮಿ ಚಾಲನೆ ನೀಡಿದರು. ಈ ಸಂದರ್ಭ ಮಾತನಾಡಿದ ಮಾತನಾಡಿದ ಅವರು, ಬೆಂಗಳೂರಿನ ಕಾವೇರಿ ಆಸ್ಪತ್ರೆಯು CSR ಅನುದಾನದ ಅಡಿಯಲ್ಲಿ, ರೈತರಿಗೆ ಮಂಡಿ ಚಿಪ್ಪು ಸಮಸ್ಯೆಗೆ ಉಚಿತ ಶಸ್ತ್ರ ಚಿಕಿತ್ಸೆ ಮಾಡಲು ಮುಂದಾಗಿರುವುದು ಶ್ಲಾಘನೀಯ ಎಂದರು.

<><><>

ನಾಳೆ, ಬೀದರ್ ಜಿಲ್ಲೆ ಹುಮನಾಬಾದ ನಲ್ಲಿ, ಕೇಂದ್ರ ಪುರಸ್ಕೃತ ಅಮೃತ್ 2.0 ಯೋಜನೆಯಡಿ ಚಿಟಗುಪ್ಪಾ, ಹಳ್ಳಿಖೇಡ, ಹುಮನಾಬಾದ್ ಪಟ್ಟಣಗಳಿಗೆ, ಕಾರಂಜಾ ಜಲಾಶಯ ನೀರು ಸರಬರಾಜು ಯೋಜನೆಗೆ ರಾಜ್ಯ ಅರಣ್ಯ, ಪರಿಸರ ಮತ್ತು ಜೀವಿಶಾಸ್ತ್ರ ಇಲಾಖೆ ಸಚಿವ ಈಶ್ವರ. ಬಿ. ಖಂಡ್ರೆ ಅವರು ಶಂಕುಸ್ಥಾಪನೆ ನೆರವೇರಿಸಲಿದ್ದಾರೆ.

<><><>

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.

<><><>

ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ, ಮಧ್ಯಾಹ್ನ 1 ಗಂಟೆ 10 ನಿಮಿಷಕ್ಕೆ.